ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯಿಂದ ಹೊರಡಿಸಿದ ಸರ್ಕಾರಿ ಆಜ್ಞೆ

880 (1134) ಶ್ರೀ ಕಿಮ್ಮನೆ ರತ್ನಾಕರ್ (ತೀರ್ಥಹಳ್ಳಿ) : ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯಿಂದ 15.09.2009 ರಂದು ಸರ್ಕಾರಿ ಆಜ್ಞೆ ಹೊರಡಿಸಿರುವುದು ನಿಜವೇ; ಪಟ್ಟಣ ಪ್ರದೇಶದಲ್ಲಿ ಪ್ರಾಕ್ಟೀಸ್ ಮಾಡುವ ವೈದ್ಯರ ಮತ್ತು ಹಳ್ಳಿಗಳಲ್ಲಿ ಪ್ರಾಕ್ಟೀಸ್ ಮಾಡುವ ವೈದ್ಯರ ಟ್ಯಾಕ್ಸ್‌ಗಳನ್ನು ಏಕರೂಪದ ಪದ್ಧತಿ ಮಾಡಲಾಗಿದೆಯೇ;

ಆ) ಪಟ್ಟಣದಲ್ಲಿ ನಡೆಸುವ ನರ್ಸಿಂಗ್ ಹೋಂ, ಕ್ಲಿನಿಕ್‌ಗಳ ಖರ್ಚು ವೆಚ್ಚಗಳು ಮತ್ತು ಆದಾಯಗಳು ವಿಭಿನ್ನ ರೀತಿಯವುಗಳು ಎಂದು ಸರ್ಕಾರದ ಗಮನದಲ್ಲಿದೆಯೇ?

ಇ) ಹಾಗಿದ್ದಲ್ಲಿ ಹಳ್ಳಿಯಲ್ಲಿ ನಡೆಸುವ ನರ್ಸಿಂಗ್ ಹೋಂ ಮತ್ತು ಕ್ಲಿನಿಕ್‌ಗಳಿಗೆ ಸರ್ಕಾರ ತೋರಿದ ಟ್ಯಾಕ್ಸ್‌ಗಳ ಅಂತರ ಯಾವುದೆಂದು (ವಿವರ ಒದಗಿಸುವುದು);

ಶ್ರೀ ಬಿ. ಶ್ರೀರಾಮುಲು (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು) :

ಅ) ಸಾರ್ವಜನಿಕ ಹಿತದೃಷ್ಟಿಯಿಂದ ಉತ್ತಮ ಗುಣಮಟ್ಟದ ಆರೋಗ್ಯ ಪಾಲನೆಗೆ ಉತ್ತೇಜನ ನೀಡುವುದು ಮತ್ತು ವೈದ್ಯ ಧರ್ಮದ ತತ್ವಗಳಿಗೆ ಅನುಸಾರವಾಗಿ ಖಾಸಗಿ ವೈದ್ಯಕೀಯ ಸಂಸ್ಥೆಗಳು ಒದಗಿಸಬೇಕಾದ ಸೇವೆಯ ಗುಣಮಟ್ಟಗಳನ್ನು ನಿಗದಿಪಡಿಸುವ ಮೂಲಕ ರಾಜ್ಯದಲ್ಲಿ ಖಾಸಗಿ ವೈದ್ಯಕೀಯ ಸಂಸ್ಥೆಗಳ ವ್ಯವಹಾರಗಳನ್ನು ಕಾನೂನಿನ ಮೂಲಕ ನಿಯಂತ್ರಿಸಿ ಮೇಲ್ವಿಚಾರಣೆ ಮಾಡುವುದು ಯುಕ್ತವಾದ ಹಿನ್ನೆಲೆಯಲ್ಲಿ ರಾಜ್ಯ ಸರ್ಕಾರ ಕರ್ನಾಟಕ ಖಾಸಗಿ ವೈದ್ಯಕೀಯ ಸಂಸ್ಥೆಗಳ ಅಧಿನಿಯಮ 2007 ನ್ನು ದಿನಾಂಕ: 16–8–2007 ರಂದು ಹೊರಡಿಸಿತ್ತು. ಸದರಿ ಅಧಿನಿಯಮದ ಅಡಿಯಲ್ಲಿ ಕರ್ನಾಟಕ ಖಾಸಗಿ ವೈದ್ಯಕೀಯ ಸಂಸ್ಥೆಗಳ ನಿಯಮಗಳು 2009ನ್ನು ದಿನಾಂಕ: 15–9–2009 ರಂದು ಹೊರಡಿಸಲಾಗಿತ್ತು.

ಮೇಲ್ಕಂಡ ಅಧಿನಿಯಮ ಹಾಗೂ ನಿಯಮಗಳು ಸರ್ಕಾರವು ಅಧಿಸೂಚಿಸಿದ ದಿನಾಂಕದಿಂದ ಜಾರಿಗೆ ಬರುವ ಕಾರಣ, ಇವುಗಳು ದಿನಾಂಕ: 10–11–2009 ರಿಂದ ಜಾರಿಗೆ ಬರುವಂತೆ ಆದೇಶಿಸಲಾಗಿದೆ.

ಈ ಅಧಿನಿಯಮ/ನಿಯಮಗಳ ಅಡಿಯಲ್ಲಿ ಖಾಸಗಿಯಾಗಿ ಪ್ರಾಕ್ಟೀಸ್ ಮಾಡುವ ವೈದ್ಯರ ತೆರಿಗೆ ಕುರಿತಂತೆ ಯಾವುದೇ ಪ್ರಸ್ತಾಪವಿರುವುದಿಲ್ಲ.

ಆ) ಖಾಸಗಿ ನರ್ಸಿಂಗ್ ಹೋಂ ಮತ್ತು ಆಸ್ಪತ್ರೆಗಳ ವೆಚ್ಚದ ವಿವರಗಳ ಕುರಿತಂತೆ ಸರ್ಕಾರಕ್ಕೆ ಸದರಿ ಖಾಸಗಿ ಸಂಸ್ಥೆಗಳು ವರದಿ ಮಾಡುವ ಪರಿಪಾಠವಿಲ್ಲದ ಕಾರಣ ಇದು ಸರ್ಕಾರದ ಗಮನಕ್ಕೆ ಬಂದಿರುವುದಿಲ್ಲ.

ಇ) ಉದ್ಭವಿಸುವುದಿಲ್ಲ.

ಸಾರಿಗೆ ಸಂಸ್ಥೆಗಳಲ್ಲಿ ಹಿರಿಯ ನಾಗರಿಕರಿಗೆ ಸೌಲಭ್ಯ

881 (1472) ಶ್ರೀ ಸಿ.ಬಿ. ಕೃಷ್ಣಭೈರೇಗೌಡ (ಬ್ಯಾಟರಾಯನಪುರ) : ಮಾನ್ಯ ಸಾರಿಗೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯ ಸಾರಿಗೆ (KSRTC) ಮತ್ತು ಬೆಂಗಳೂರು ಮಹಾನಗರ ಸಾರಿಗೆ ಸಂಸ್ಥೆಯ ಬಸ್ಸುಗಳಲ್ಲಿ ಹಿರಿಯ ನಾಗರಿಕರಿಗೆ ರಿಯಾಯಿತಿ ನೀಡಲು ನಿಗದಿಪಡಿಸಿರುವ ವಯೋಮಿತಿ ಎಷ್ಟು;

ಆ) ಭಾರತೀಯ ರೈಲ್ವೆಯಲ್ಲಿ ಹಿರಿಯ ನಾಗರಿಕರಿಗೆ 60 ವರ್ಷ ವಯೋಮಿತಿ ನಿಗದಿ ಮಾಡಿರುವುದು ಸರ್ಕಾರದ ಗಮನದಲ್ಲಿದೆಯೇ;

ಇ) ಹಾಗಿದ್ದಲ್ಲಿ, ಹಿರಿಯ ನಾಗರಿಕರ ಅನುಕೂಲ ಮತ್ತು ಮಾನವೀಯತೆಯ ದೃಷ್ಟಿಯಿಂದ ರಾಜ್ಯದಲ್ಲಿ ಈ ವಯೋಮಿತಿಯನ್ನು 60 ವರ್ಷವೆಂದು ನಿಗದಿಗೊಳಿಸಲಾಗುವುದೇ;

ಇ) ರಾಜ್ಯ ಸಾರಿಗೆ ಬಸ್ಸುಗಳಲ್ಲಿ ಹಿರಿಯ ನಾಗರಿಕರಿಗೆ ಕನಿಷ್ಟ 4 ಆಸನಗಳನ್ನು ಮೀಸಲಿರಿಸಲಾಗುವುದೇ?

ಶ್ರೀ ಆರ್. ಅಶೋಕ್ (ಸಾರಿಗೆ ಸಚಿವರು) :

ಅ) 65 ವರ್ಷ ಮತ್ತು ಅದಕ್ಕೂ ಹೆಚ್ಚು.

ಆ) ಹೌದು.

ಇ) ಪ್ರಸ್ತಾವನೆ ಸರ್ಕಾರದ ಮುಂದಿರುವುದಿಲ್ಲ.